ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. ದಿಃ **12-04-2022**

PW-1

<u>ಮುಖ್ಯ ವಿಚಾರಣೆಃ ಶ್ರೀ ಹೆಚ್ ಬಿ ಪಿ ವಕೀಲರಿಂದಃ</u>

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದನ್ನು ನನ್ನ ಮುಖ್ಯ ವಿಚಾರಣೆಯ ಸಾಕ್ಷ್ಯವನ್ನಾಗಿ ಪರಿಗಣಿಸಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ. ಪ್ರಮಾಣ ಪತ್ರದಲ್ಲಿ ಬರೆಸಿರುವ ಎಲ್ಲಾ ವಿಷಯಗಳು ಸತ್ಯ ಮತ್ತು ಸರಿ ಇದ್ದು, ಅವುಗಳನ್ನು ಓದಿ ತಿಳಿದುಕೊಂಡು ಸರಿ ಇದೆ ಎಂದು ತಿಳಿದು ಸರಿ ಮಾಡಿರುತ್ತೇನೆ ಎಂದು ಪ್ರಮಾಣೀಕರಿಸಿರುತ್ತಾರೆ.

**2.** ಸಾಕ್ಷಿಯು ಎಮ್ ನಂಃ **9/07** ರ ಆದೇಶದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-**1** ಎಂದು ಗುರುತಿಸಲಾಯಿತು.

ಸಾಕ್ಷಿಯು **2** ನೇ ಅರ್ಜಿದಾರರಾದ ಪ್ರತೀಕ್ಷಾರವರ ಕಾಲೇಜಿಗೆ ಸಂಬಂಧಿಸಿದ ಎರಡು ರಶೀದಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-**2** ಮತ್ತು ನಿಪಿ-**3** ಎಂದು ಗುರುತಿಸಲಾಯಿತು.

ಸಾಕ್ಷಿಯು **2** ನೇ ಅರ್ಜಿದಾರರಿಗೆ ಸಂಬಂಧಿಸಿದ ಎಸ್ ಎಸ್ ಎಲ್ ಸಿ ಅಂಕಪಟ್ಟಿಯ ದೃಢೀಕೃತ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ಎದುರುದಾರರ ಪರ ವಕೀಲರ ತಕರಾರಿಗೆ ಒಳಪಟ್ಟು ನಿಪಿ-**4** ಎಂದು ಗುರುತಿಸಲಾಯಿತು. ಆದ್ದರಿಂದ ಅರ್ಜಿಯಲ್ಲಿ ಕೋರಿರುವಂತೆ ಆದೇಶ ಮಾಡಬೇಕಾಗಿ ಪ್ರಾರ್ಥಿಸುತ್ತೇನೆ.

**<u>ಪಾಟೀ ಸವಾಲುಃ</u>** ಎದುರುದಾರರ ಪರಃ ಶ್ರೀ ಎ ಕೆ ಎಚ್ ವಕೀಲರು ಸಮಯವನ್ನು ಕೋರಿದ್ದು, ಸಮಯಾವಕಾಶ ನೀಡಲಾಯಿತು.

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

ಎ.ಹೆ.ಸಿ.ನ್ಯಾ. ಮತ್ತು ಪ್ರ.ದ.ನ್ಯಾ.ದಂ., ಕಾರ್ಕಳ